**All India Radio: Bangalore**
**Regional Bulletin In Kannada**
**04.05.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**04.05.2026 / 6.40 p.m.**

******************

ಮುಖ್ಯಾಂಶಗಳು

೧. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸಮರ್ಥ್ ಮಲ್ಲಿಕಾರ್ಜುನ್‌ಗೆ ಗೆಲುವು; ಬಾಗಲಕೋಟೆಯಲ್ಲಿ ಉಮೇಶ್ ಮೇಟಿಗೆ ಜಯ

೨. ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿನ ಹಿನ್ನೆಲೆ; ಮತದಾರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಧನ್ಯವಾದ

೩. ರಾಜ್ಯದಲ್ಲಿ ಸರ್ಕಾರಿ ಎಂಜಿನಿಯರಿಂಗ್ ಕೋರ್ಸ್‌ಗಳನ್ನು ಮತ್ತಷ್ಟು ಮೇಲ್ದರ್ಜೆಗೇರಿಸಲು ಕ್ರಮ- ಸಚಿವ ಡಾ.ಎಂ.ಸಿ.ಸುಧಾಕರ್

೪. ಬೆಳಗಾವಿಯಲ್ಲಿ ಸುಸಜ್ಜಿತ ಬಸ್ ಡಿಪೊ ಲೋಕಾರ್ಪಣೆಗೊಳಿಸಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ

೫. ಕರ್ನಾಟಕ ಮಾಹಿತಿ ಆಯೋಗದ ಮುಖ್ಯ ಮಾಹಿತಿ ಆಯುಕ್ತರಾಗಿ ಜಿ.ಸತ್ಯವತಿ ಪ್ರಮಾಣವಚನ

---

ದಾವಣಗೆರೆ ದಕ್ಷಿಣ ವಿಧಾನಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಮಲ್ಲಿಕಾರ್ಜುನ್ ಗೆಲುವು ಸಾಧಿಸಿದ್ದಾರೆ.

ಸಮರ್ಥ್ ಅವರು ೫ ಸಾವಿರ ೭೦೮ ಮತಗಳ ಅಂತರದಿಂದ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸ ಕರಿಯಪ್ಪ ಅವರನ್ನು ಪರಾಭವಗೊಳಿಸಿದ್ದಾರೆ. ಸಮರ್ಥ್ ಅವರು ೬೯ ಸಾವಿರದ ೫೭೮ ಮತಗಳನ್ನು ಗಳಿಸಿದರೆ, ಸಮೀಪದ ಪ್ರತಿಸ್ಪರ್ಧಿ ಬಿಜೆಪಿಯ ಶ್ರೀನಿವಾಸ ಟಿ. ದಾಸಕರಿಯಪ್ಪ ೬೩ ಸಾವಿರದ ೮೭೦ ಮತಗಳನ್ನು ಪಡೆದಿದ್ದಾರೆ.

ಎಸ್‌ಡಿಪಿಐ ಅಭ್ಯರ್ಥಿ ಅಫ್ಸರ್ ಕೊಡ್ಲಿಪೇಟೆ ೧೮ ಸಾವಿರದ ೯೭೫ ಮತಗಳೊಂದಿಗೆ ಮೂರನೇ ಸ್ಥಾನ ಗಳಿಸಿದ್ದಾರೆ.

೩ ಇವಿಎಂಗಳಲ್ಲಿ ಕಂಡು ಬಂದ ತಾಂತ್ರಿಕ ದೋಷದಿಂದ ಮತ ಎಣಿಕೆ ನಿಧಾನಗತಿಯಲ್ಲಿ ಸಾಗಿತ್ತಲ್ಲದೇ ಫಲಿತಾಂಶ ಘೋಷಣೆ ಕೂಡ ತಡವಾಯಿತು.

---

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ೨೧ ಸಾವಿರದ ೮೬೬ ಮತಗಳಿಂದ ಗೆಲುವು ಸಾಧಿಸಿದ್ದಾರೆ.

ಉಮೇಶ್ ಮೇಟಿ ಅವರಿಗೆ ೯೬ ಸಾವಿರದ ೯೪೧ ಮತಗಳು ಲಭಿಸಿವೆ. ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿ ಮಠ ಅವರಿಗೆ ೭೬ ಸಾವಿರದ ೭೫ ಮತಗಳು ಲಭಿಸಿವೆ.

ಗೆಲುವಿನ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಉಮೇಶ್ ಮೇಟಿ, ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಹಾಗೂ ಪಕ್ಷದ ಪ್ರಣಾಳಿಕೆ ಗೆಲುವಿಗೆ ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಕ್ಷೇತ್ರದ ಜನತೆಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

---

ಬಾಗಲಕೋಟೆ ಮತ್ತು ದಾವಣಗೆರೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಕಾರಣರಾದ ಮತದಾರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಧನ್ಯವಾದ ಸಲ್ಲಿಸಿದ್ದಾರೆ.

ಇದು ಸರ್ಕಾರದ ಸಾಧನೆಗಳಿಗೆ ಮತ್ತು ಕಾಂಗ್ರೆಸ್ ಪಕ್ಷದ ಸಿದ್ಧಾಂತಕ್ಕೆ ಸಿಕ್ಕ ಜಯವಾಗಿದೆ ಎಂದು ತಿಳಿಸಿದ್ದಾರೆ.

ವಿರೋಧ ಪಕ್ಷಗಳ ಅಪಪ್ರಚಾರ ಹಾಗೂ ಹಣದ ಪ್ರಭಾವದ ಹೊರತಾಗಿಯೂ ಎರಡೂ ಕ್ಷೇತ್ರಗಳ ಮತದಾರರು ಕಾಂಗ್ರೆಸ್ ಪಕ್ಷದ ಮೇಲೆ ನಂಬಿಕೆ ಇಟ್ಟು ಮತ ಚಲಾಯಿಸಿದ್ದಾರೆ.

ತಮಿಳುನಾಡು ವಿಧಾನಸಭಾ ಚುನಾವಣೆ ಫಲಿತಾಂಶವನ್ನು ನಿರೀಕ್ಷಿಸಲಿರಲಿಲ್ಲ, ಕೇರಳದಲ್ಲಿ ಕಾಂಗ್ರೆಸ್ ಪಕ್ಷದ ಗೆಲುವು ನಿರೀಕ್ಷಿತ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಶೃಂಗೇರಿ ಮರು ಎಣಿಕೆ ಫಲಿತಾಂಶವು ಇಡೀ ದೇಶಕ್ಕೇ ಮಾರಕ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟಿದ್ದಾರೆ

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸೋಲು, ಗೆಲುವು ಸಾಮಾನ್ಯ. ಆದರೆ ಇಲ್ಲಿ ನಡೆದಿರುವುದು ಷಡ್ಯಂತ್ರ ಎಂದು ಆರೋಪಿಸಿದ್ದಾರೆ. ಈ ಫಲಿತಾಂಶದ ಬಗ್ಗೆ ಕಾನೂನಾತ್ಮಕವಾಗಿಯೂ ಹೋರಾಟ ಮಾಡಲಾಗುವುದು ಎಂದು ಹೇಳಿದ್ದಾರೆ.

ಇದೇ ವೇಳೆ, ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಕೈಹಿಡಿದಿವೆ ಎಂದು ಉಪ ಚುನಾವಣೆ ಫಲಿತಾಂಶದ ಕುರಿತು ಪ್ರತಿಕ್ರಿಯಸಿದ್ದಾರೆ.

ಕೇರಳದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿರುವುದು ನಿರೀಕ್ಷಿತ ಎಂದು ತಿಳಿಸಿದ್ದಾರೆ.

ಧ್ವನಿ: ಡಿ.ಕೆ.ಶಿವಕುಮಾರ್

---

ದೇಶದ ಭದ್ರತೆಗೆ ನರೇಂದ್ರ ಮೋದಿ ಅವರೊಬ್ಬರೇ ಸೂಕ್ತ ಎಂಬುದು ಐದು ರಾಜ್ಯಗಳ ಚುನಾವಣೆಯ ಫಲಿತಾಂಶದಲ್ಲಿ ಕಂಡುಬಂದಿದೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ  ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾನತಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ದುರಾಡಳಿತದಿಂದ ಜನರು ಬೇಸತ್ತು ಹೋಗಿದ್ದರು ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಪಂಚರಾಜ್ಯಗಳ ಚುನಾವಣೆಯಲ್ಲಿ ನಾಲ್ಕು ರಾಜ್ಯಗಳಲ್ಲಿ ಬಿಜೆಪಿಗೆ ಅಭೂತಪೂರ್ವ ಗೆಲುವು ದೊರೆತಿದೆ. ಇದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್ ಡಿಎ ಸರ್ಕಾರದ ಅಭಿವೃದ್ಧಿ ಕಾರ್ಯಕ್ಕೆ ಜನರು ನೀಡಿರುವ ಮೆಚ್ಚುಗೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿಯವರ ಟಿಎಂಸಿಯ ದುರಾಡಳಿತ, ಕೋಮು ರಾಜಕಾರಣ, ಕೈಗಾರಿಕಾ ವಿರೋಧಿ ನೀತಿಗಳು, ಬಾಂಗ್ಲಾದ ಅಕ್ರಮ ವಲಸಿಗರ ಹಿತ ಕಾಯುವ

ನೀತಿಗಳಿಂದ ಬೇಸತ್ತ ಜನರು ಎನ್ ಡಿಎ ಗೆ ಆಶೀರ್ವದಿಸಿ ಟಿಎಂಸಿಯನ್ನು ಕಿತ್ತೊಗೆದಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ರಾಜ್ಯದ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಸೇರಿದಂತೆ ಐದು ರಾಜ್ಯಗಳ ಚುನಾವಣಾ ಫಲಿತಾಂಶ ಕುರಿತ ವಿಶ್ಲೇಷಣೆ ಇಂದು ರಾತ್ರಿ ೮ ಗಂಟೆಗೆ ಮೂಡಿ ಬರಲಿದೆ.

ಬೆಂಗಳೂರು ವಿಶ್ವವಿದ್ಯಾಲಯದ ರಾಜಕೀಯ ಶಾಸ್ತ್ರ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದ ಡಾ. ವೀಣಾದೇವಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಹಿರಿಯ ಪತ್ರಕರ್ತರಾದ ಕೆ.ಸಿ. ಶಿವರಾಂ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

---

ಪ್ರಸ್ತುತವಿರುವ ಕೈಗಾರಿಕೆಗಳ ಬೇಡಿಕೆ ಹಾಗೂ ನಿರೀಕ್ಷೆಗಳ ಕೌಶಲ್ಯಗಳನ್ನು ಪೂರೈಸುವ ನಿಟ್ಟನಿಲ್ಲಿ ರಾಜ್ಯದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿರುವ ಕೋರ್ಸುಗಳನ್ನು ಮತ್ತಷ್ಟು ಮೇಲ್ದರ್ಜೆಗೇರಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ರಾಮನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇಂದು ಮೈಕ್ರೋಸಾಫ್ಟ್, ಎಸ್ಎಪಿ ಮತ್ತು ಸೀಮೆನ್ಸ್ ಇನೋವೇಷನ್ ಹಬ್ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು ೧೧ ಸರ್ಕಾರಿ ಕಾಲೇಜಿಗಳಿದ್ದು, ಈಗಾಲೇ ೬ ಕಾಲೇಜುಗಳಲ್ಲಿ ಈ ಲ್ಯಾಬ್ ಮಾಡಲಾಗಿದೆ. ಬಾಕಿ ಉಳಿದ ೫ ಕಾಲೇಜುಗಳಲ್ಲಿ ಮುಂದಿನ ದಿನಗಳಲ್ಲಿ ಲ್ಯಾಬ್ ನಿರ್ಮಾಣಕ್ಕೆ ಕ್ರಮವಹಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

---

ಬೆಳಗಾವಿ ಜಿಲ್ಲೆಯ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಬೆಳಗಾವಿಯಲ್ಲಿ ಇಂದು ನೂತನವಾಗಿ ನಿರ್ಮಿಸಲಾದ ಸುಸಜ್ಜಿತ ಬಸ್ ಡಿಪೋ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗೆ ಹೆಚ್ಚಿನ ಆದಾಯ ಬರುತ್ತಿದ್ದು, ಸಾರ್ವಜನಿಕರ ಅನುಕೂಲಕ್ಕಾಗಿ ರಾಜ್ಯಾದ್ಯಂತ ಹೊಸ ಬಸ್‌ಗಳನ್ನು ಸೇರ್ಪಡೆಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಈ ನೂತನ ಡಿಪೋದಲ್ಲಿ ಬಸ್‌ಗಳ ದುರಸ್ತಿಗಾಗಿ, ಹೈಟೆಕ್ ವರ್ಕ್‌ಶಾಪ್, ಸಿಬ್ಬಂದಿ ವಿಶ್ರಾಂತಿ ಕೊಠಡಿ ಹಾಗೂ ಸುಸಜ್ಜಿತ ವಾಹನ ನಿಲುಗಡೆ ವ್ಯವಸ್ಥೆ ಕಲ್ಪಿಸಲಾಗಿದೆ. ಗ್ರಾಮೀಣ ಮತ್ತು ನಗರ ಭಾಗದ ಪ್ರಯಾಣಿಕರಿಗೆ ಹೆಚ್ಚಿನ ಬಸ್ ಸೌಲಭ್ಯ ಒದಗಿಸುವುದು ಹಾಗೂ ಬಸ್‌ಗಳ ನಿರ್ವಹಣೆಯನ್ನು ಉತ್ತಮಪಡಿಸುವುದು ಈ ಡಿಪೋದ ಮುಖ್ಯ ಉದ್ದೇಶವಾಗಿದೆ.

---

ಕರ್ನಾಟಕ ಮಾಹಿತಿ ಆಯೋಗದ  ರಾಜ್ಯ ಮುಖ್ಯ ಮಾಹಿತಿ ಆಯುಕ್ತರಾಗಿ ಇಂದು ಜಿ.ಸತ್ಯವತಿ ಅವರು ಪ್ರಮಾಣವಚನ ಸ್ವೀಕರಿಸಿದ್ದಾರೆ.

ಬೆಂಗಳೂರಿನ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಮಾಣ ವಚನ ಬೋಧಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಸಚಿವ ಎಚ್.ಕೆ.ಪಾಟೀಲ್, ಇಂಧನ ಸಚಿವ ಕೆ.ಜೆ.ಜಾರ್ಜ್ ಉಪಸ್ಥಿತರಿದ್ದರು.

---

ಮಾನ್ಸೂನ್ ಪೂರ್ವ ಸಿದ್ಧತೆ ಪ್ರಯುಕ್ತ ಜಿಬಿಎ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಮಳೆ ನೀರು ಚರಂಡಿ ಹೂಳು ತಗೆಯುವುದು, ಶೋಲ್ಡರ್ ಡ್ರೈನ್ಸ್ ಹಾಗೂ ಗ್ರೇಟಿಂಗ್ಸ್‌ಗಳ ಸ್ವಚ್ಛತೆಯನ್ನು ಖಾತರಿಪಡಿಸಿಕೊಳ್ಳಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಪಾಲಿಕೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ತಂಡಗಳನ್ನು ರಚಿಸಿ, ಆಯಾ ನಗರ ಪಾಲಿಕೆಗಳ ವ್ಯಾಪ್ತಿಯ ಎಲ್ಲಾ ಆರ್ಟೀರಿಯಲ್ ಮತ್ತು ಸಬ್-ಆರ್ಟೀರಿಯಲ್ ರಸ್ತೆಗಳ ಮಳೆ ನೀರು, ಚರಂಡಿಗಳಲ್ಲಿ ಒಂದು ಕಿಲೋಮೀಟರ್‌ಗಳನ್ನು ಕನಿಷ್ಠ ೧೦ ಕಡೆ ಡ್ರೈನ್ ಸ್ಲಾಬ್ ಗಳ ಅಥವಾ ಗ್ರೇಟಿಂಗ್ ಗಳನ್ನು ತೆರೆದು ನೀರು ಸರಾಗವಾಗಿ ಹರಿಯಲು ಅವಕಾಶವಿದೆಯೇ ಎಂಬುದನ್ನು ಪರಿಶೀಲಿಸುವಂತೆ ಸೂಚನೆ ನೀಡಿದ್ದಾರೆ.

---

ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಅಂಚೆ ಮತಪತ್ರಗಳಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಮೇಲೆ ಬಿಜೆಪಿ ವಿಜೇತ ಅಭ್ಯರ್ಥಿ ಡಿ.ಎನ್.ಜೀವರಾಜ್ ಸೇರಿದಂತೆ ಮೂವರ ವಿರುದ್ಧ ಪೊಲೀಸರು ಚಿಕ್ಕಮಗಳೂರು ಪಟ್ಟಣ ಪೊಲೀಸ್ ಠಾಣೆಯಲ್ಲಿ ಇಂದು ಪ್ರಕರಣ ದಾಖಲಿಸಿದ್ದಾರೆ.

ಮೇ ೩ ರಂದು ಅಂಚೆ ಮತ ಎಣಿಕೆ ಮೇಜಿನ ಏಜೆಂಟ್ ಆಗಿ ಸೇವೆ ಸಲ್ಲಿಸಿದ್ದ ವಕೀಲ ಸುಧೀರ್ ಕುಮಾರ್ ಮುರೊಳ್ಳಿ ಈ ಸಂಬಂಧ ದೂರು ದಾಖಲಿಸಿದ್ದಾರೆ. ಎಣಿಕೆ ಪ್ರಕ್ರಿಯೆಯಲ್ಲಿ ಮತಪತ್ರಗಳನ್ನು ತಿರುಚಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಈ ಕುರಿತಂತೆ ಪ್ರತಿಕ್ರಿಯಿಸಿರುವ ಬಿಜೆಪಿ ಶಾಸಕ ಜೀವರಾಜ್ ಸೋಲಿನ ಬಳಿಕ ಮತ ತಿರುಚುವಿಕೆ ಆರೋಪ ಮಾಡುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.

---

ವಿಜಯಪುರ ನಗರದಲ್ಲಿ ಇಂದು ವಿವಿಧ ಅಭಿವೃದ್ದಿ ಕಾಮಗಾರಿಗಳಿಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ಚಾಲನೆ ನೀಡಿದರು.

_______ ಮುಕ್ತಾಯ _______